ಸವಾರಿ ಮಾಡುವವನು ಪಾದಚಾರಿಗೆ ಸಲಾಂ ಹೇಳಬೇಕು, ಪಾದಚಾರಿ ಕುಳಿತಿರುವವನಿಗೆ ಸಲಾಂ ಹೇಳಬೇಕು ಮತ್ತು ಸಣ್ಣ ಗುಂಪಿನ ಜನರು ದೊಡ್ಡ ಗುಂಪಿನ ಜನರಿಗೆ ಸಲಾಂ ಹೇಳಬೇಕು

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಸವಾರಿ ಮಾಡುವವನು ಪಾದಚಾರಿಗೆ ಸಲಾಂ ಹೇಳಬೇಕು, ಪಾದಚಾರಿ ಕುಳಿತಿರುವವನಿಗೆ ಸಲಾಂ ಹೇಳಬೇಕು ಮತ್ತು ಸಣ್ಣ
ಗುಂಪಿನ ಜನರು ದೊಡ್ಡ ಗುಂಪಿನ ಜನರಿಗೆ ಸಲಾಂ ಹೇಳಬೇಕು." ಬುಖಾರಿಯ ವರದಿಯಲ್ಲಿ ಹೀಗಿದೆ: "ಕಿರಿಯರು ಹಿರಿಯರಿಗೆ ಸಲಾಂ ಹೇಳಬೇಕು, ಹಾದುಹೋಗುವವನು ಕುಳಿತಿರುವವನಿಗೆ ಸಲಾಂ
ಹೇಳಬೇಕು ಮತ್ತು ಸಣ್ಣ ಗುಂಪಿನ ಜನರು ದೊಡ್ಡ ಗುಂಪಿನ ಜನರಿಗೆ ಸಲಾಂ ಹೇಳಬೇಕು."
[صحيح] [متفق عليه]

ಜನರಿಗೆ "ಅಸ್ಸಲಾಮು ಅಲೈಕುಂ ವರಹ್ಮತುಲ್ಲಾಹಿ ವಬರಕಾತುಹು" ಎಂದು ಸಲಾಂ ಹೇಳುವುದರ ಶಿಷ್ಟಾಚಾರವನ್ನು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ಕಲಿಸುತ್ತಿದ್ದಾರೆ. ಕಿರಿಯರು ಹಿರಿಯರಿಗೆ ಸಲಾಂ ಹೇಳಬೇಕು, ಸವಾರಿ ಮಾಡುವವನು ಪಾದಚಾರಿಗೆ ಸಲಾಂ ಹೇಳಬೇಕು, ಪಾದಚಾರಿ ಕುಳಿತಿರುವವನಿಗೆ ಸಲಾಂ ಹೇಳಬೇಕು, ಸಣ್ಣ ಸಂಖ್ಯೆಯ ಜನರು ದೊಡ್ಡ ಸಂಖ್ಯೆಯ ಜನರಿಗೆ ಸಲಾಂ ಹೇಳಬೇಕು.

http://sunnah.global/hadeeth/kn/show/4243